SD

ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : **6(136+66+140+08+117)**

ಸದಸ್ಯರ ಹೆಸರು : ಶ್ರೀ ಶಶೀಲ್ ಜಿ. ನಮೋಶಿ, ಶ್ರೀ ಕೆ.ಟಿ.ಶ್ರೀಕಂಠೇಗೌಡ, ಶ್ರೀ ಪುಟ್ಟಣ್ಣ, ಶ್ರೀ ಎಸ್.ವಿ.ಸಂಕನೂರ, ಹಾಗೂ ಶ್ರೀ ಅರುಣ ಶಹಾಪುರ

ಉತ್ತರಿಸುವ ದಿನಾಂಕ : **13-12-2021**

ಉತ್ತರಿಸುವ ಸಚಿವರು : **ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು**

ಕ್ರ. ಸಂ.	ಪ್ರಶ್ನೆ	ಉತ್ತರ
ಅ	ರಾಜ್ಯದಲ್ಲಿನ ಖಾಸಗಿ ಅನುದಾನಿತ ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು;	ರಾಜ್ಯದಲ್ಲಿರುವ ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳ ಸಂಖ್ಯೆ- 2984 ರಾಜ್ಯದಲ್ಲಿರುವ ಖಾಸಗಿ ಅನುದಾನಿತ ಪ್ರೌಢಶಾಲೆಗಳ ಸಂಖ್ಯೆ- 3788 ರಾಜ್ಯದಲ್ಲಿರುವ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ - 800
ಆ	ರಾಜ್ಯದ ಖಾಸಗಿ ಅನುದಾನಿತ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ ಹಾಗೂ ರಾಜೀನಾಮೆಯಿಂದ ತೆರವಾಗಿರುವ ಶಿಕ್ಷಕರ ಹಾಗೂ ಉಪನ್ಯಾಸಕರ ಹುದ್ದೆಗಳನ್ನು ಭರ್ತಿಮಾಡಿಕೊಳ್ಳಲು ಯಾವ ದಿನಾಂಕದವರೆಗೆ ಸರ್ಕಾರವು ಅನುಮತಿ ನೀಡಿದೆ;(ವಿವರ ನೀಡುವುದು)	ಖಾಸಗಿ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ ಹಾಗೂ ರಾಜೀನಾಮೆಯಿಂದ ತೆರವಾಗಿರುವ ಶಿಕ್ಷಕರ ಹಾಗೂ ಉಪನ್ಯಾಸಕರ ಹುದ್ದೆಗಳನ್ನು ಭರ್ತಿಮಾಡಿಕೊಳ್ಳಲು ದಿನಾಂಕ:31.12.2015ರವರೆಗೆ ಅನುಮತಿ ನೀಡಲಾಗಿದೆ. ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8 2020 ದಿನಾಂಕ:10.06.2020ರನ್ವಯ ಅನುದಾನಿತ ಪ್ರೌಢಶಾಲೆ/ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡುವಂತಿಲ್ಲ ಎಂದು ಮಿತವ್ಯಯ ಆದೇಶ ಜಾರಿ ಮಾಡಿದ್ದು ಸದರಿ ಆದೇಶವು ಪ್ರಸ್ತುತವು ಜಾರಿಯಲ್ಲಿರುತ್ತದೆ.
ಇ	ಕೋವಿಡ್ ಹಿನ್ನಲೆಯಲ್ಲಿ ನೇಮಕಾತಿ ಪ್ರಕ್ರಿಯೆಗೆ ತಡೆಯಾಜ್ಞೆ ನೀಡಿರುವುದನ್ನು ಹಿಂಪಡೆಯಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಹುದ್ದೆಗಳನ್ನು	ಸರ್ಕಾರದ ಪತ್ರ ಸಂಖ್ಯೆ:ಇಪಿ 59 ಎಸ್.ಇ.ಎಸ್ 2020 ದಿನಾಂಕ:05.07.2021ರಲ್ಲಿ ಅನುದಾನಿತ ಪ್ರೌಢಶಾಲೆಗಳಲ್ಲಿ ನಿವೃತ್ತಿ, ನಿಧನ ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ತೆರವಾದ 257 ಹುದ್ದೆಗಳನ್ನು 2021-22ನೇ ಶೈಕ್ಷಣಿಕ ವರ್ಷ ಪ್ರಾರಂಭಗೊಂಡ ನಂತರ (ಜೂನ್-ಜುಲೈ) ನೇಮಕಾತಿ ಆದೇಶ

	ತುಂಬಿಕೊಳ್ಳಲು ಅನುಮತಿ ನೀಡಲಾಗಿತ್ತು; ಈ ಪೈಕಿ ಇಲ್ಲಿಯವರೆಗೆ ಎಷ್ಟು ಹುದ್ದೆಗಳನ್ನು ತುಂಬಿಕೊಳ್ಳಲಾಗಿದೆ; ಈ ಪ್ರಕ್ರಿಯೆ ಯಾವ ಹಂತದಲ್ಲಿದೆ; ವಿಳಂಬವಾಗಿದ್ದಲ್ಲಿ ಕಾರಣಗಳೇನು; (ಸಂಪೂರ್ಣ ಮಾಹಿತಿ ನೀಡುವುದು)	ನೀಡಲು ಸೂಚಿಸಲಾಗಿದೆ. ಬೆಂಗಳೂರು ಆಯುಕ್ತಾಲಯದ ವ್ಯಾಪ್ತಿಯಡಿ ಅನುದಾನಿತ ಪ್ರೌಢಶಾಲೆಗಳ 12 ಸಹ ಶಿಕ್ಷಕರ ಹುದ್ದೆಗಳನ್ನು ನಿಯಮಾನುಸಾರ ಪರಿಶೀಲಿಸಿ ಅನುದಾನಸಹಿತವಾಗಿ ಅನುಮೋದಿಸಲಾಗಿದೆ. ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ 173 ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅನುಮೋದನೆ ನೀಡಲಾಗಿದೆ. ಇದರಲ್ಲಿ 07 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ. 17 ಹುದ್ದೆಗಳ ಆಯ್ಕೆಪಟ್ಟಿಗೆ ಅನುಮತಿ ನೀಡಲಾಗಿದೆ. 20 ಹುದ್ದೆಗಳಿಗೆ ಪ್ರಥಮ ವೇತನ ಬಿಡುಗಡೆ ಮಾಡಲಾಗಿದೆ.
ಈ	ಕಳೆದ 2 ವರ್ಷಗಳಿಂದ ಕೋವಿಡ್ ಕಾರಣದಿಂದ ಈ ಸಂಸ್ಥೆಗಳ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ತಡೆಹಿಡಿದಿದ್ದರಿಂದ ಅಭ್ಯರ್ಥಿಗಳ ವಯೋಮಿತಿ ಮೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಅಭ್ಯರ್ಥಿಗಳ ನೇಮಕಾತಿಯಲ್ಲಿ 2 ವರ್ಷಗಳ ಕಾಲ ವಯೋಮಿತಿಯನ್ನು ಸಡಿಲಿಕೆ ಮಾಡಲು ಸರ್ಕಾರ ಕ್ರಮ ವಹಿಸುವುದೇ;	ಇಂತಹ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.
ಉ	2015ರ ನಂತರ ನಿವೃತ್ತಿ, ನಿಧನ ಹಾಗೂ ರಾಜೀನಾಮೆಯಿಂದ ತೆರವಾಗಿರುವ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡುವ ಕುರಿತು ಸರ್ಕಾರದ ನಿಲುವೇನು?	ಖಾಸಗಿ ಅನುದಾನಿತ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ:01.012016 ರಿಂದ 31.12.2020ರವರೆಗೆ ನಿವೃತ್ತಿ, ನಿಧನ ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ತೆರವಾದ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಮೂರು ಆಯುಕ್ತಾಲಯಗಳ ವ್ಯಾಪ್ತಿಯಿಂದ ಮಾಹಿತಿ ಪಡೆದು ಆರ್ಥಿಕ ಇಲಾಖೆಗೆ ಸಲ್ಲಿಸಲು ಕ್ರಮವಹಿಸಲಾಗುತ್ತಿದೆ.

ಇಪಿ 457 ಎಸ್‌ಇಎಸ್ 2021

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು